# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ-ಜಲಾನಯನ ಅಭಿವೃದ್ಧಿ ಘಟಕದ (PMKSY-WDC) ಬ್ಯಾಚ್-V ಮತ್ತು ಬ್ಯಾಚ್-VI ಯೋಜನೆಗಳನ್ನು ಧಿನಾಂಕ: 01.09.2018ರಿಂದ ರಾಜ್ಯದಲ್ಲಿ ಸ್ಥಗಿತಗೊಳಿಸುವ ಬಗ್ಗೆ.

**ಓದಲಾಗಿದೆ**

1. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: Z11011/32/2014-PPC, ದಿನಾಂಕ: 01.08.2018.
2. ದಿನಾಂಕ: 14.08.2018 ರಂದು ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ.
3. ಜಲಾನಯನ ಅಭಿವೃದ್ಧಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಜಅಇ/ಉಕೃನಿ/ಕೃಅ2/ B-V & B-VI/ಸಅ/39/18-19, ದಿನಾಂಕ:26.09.2018, 02.04.2019 & 09.052019.

**<u>ಪ್ರಸ್ತಾವನೆ:</u>**

ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ-ಜಲಾನಯನ ಅಭಿವೃದ್ದಿ ಘಟಕ (PMKSY-WDC) ಕಾರ್ಯಕ್ರಮವನ್ನು (ಹಿಂದಿನ ಸಮಗ್ರ ಜಲಾನಯನ ನಿರ್ವಹಣಾ ಕಾರ್ಯಕ್ರಮ) ಕೇಂದ್ರ ಸರ್ಕಾರದ ಸಾಮಾನ್ಯ ಮಾರ್ಗಸೂಚಿ-2008 ರ ಅನ್ವಯ 2009-10ನೇ ಸಾಲಿನಿಂದ ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. 2013-14 ಮತ್ತು 2014-15ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ-ಜಲಾನಯನ ಅಭಿವೃದ್ಧಿ ಘಟಕದ (PMKSY-WDC) ಬ್ಯಾಚ್-V ಮತ್ತು ಬ್ಯಾಚ್-VI ರಡಿ ಕೇಂದ್ರ ಭೂ ಸಂಪನ್ಮೂಲ ಇಲಾಖೆಯು ಒಟ್ಟು 141 ಯೋಜನೆಗಳನ್ನು ಶೇ. 60:40ರ ರಾಜ್ಯ ಮತ್ತು ಕೇಂದ್ರದ ಪಾಲಿನ ವೆಚ್ಚ ಭರಿಸುವ ಅನುಪಾತದಲ್ಲಿ ಒಟ್ಟು 6.48 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಅನುಷ್ಠಾನ ಮಾಡಲು ರೂ. 845.22 ಕೋಟಿಗಳಿಗೆ (ಕೇಂದ್ರದ ಪಾಲು ರೂ. 502.13 ಕೋಟಿಗಳು ಮತ್ತು ರಾಜ್ಯದ ಪಾಲು ರೂ. 338.08 ಕೊಟಿಗಳು) ಅನುಮೋದನೆ ನೀಡಿ ಸಾಮಾನ್ಯ ಮಾರ್ಗಸೂಚಿ-2008 (ಪರಿಷ್ಕರಿಸಿದ ಆವೃತ್ತಿ 2011) ರ ಪ್ರಕಾರ ಚಟುವಟಿಕೆಗಳನ್ನು ಅನುಷ್ಠಾನ ಮಾಡಲು ಸೂಚನೆ ನೀಡಲಾಗಿತ್ತು.

ಮೇಲೆ ಓದಲಾದ (1)ರ ಕೇಂದ್ರ ಸರ್ಕಾರದ ಪತ್ರದಲ್ಲಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ-ಜಲಾನಯನ ಅಭಿವೃದ್ಧಿ ಘಟಕ (PMKSY-WDC) ಅಡಿ ಗುರುತಿಸಲಾಗಿದ್ದ 141 ಯೋಜನೆಗಳಿಗೆ ಕೇಂದ್ರದ ಪಾಲಿನ ಅನುದಾನವನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ಸ್ಥಗಿತಗೊಳಿಸುವುದಾಗಿ ಸೂಚನೆ ನೀಡಿರುತ್ತದೆ. ಸದರಿ ಯೋಜನೆಗಳು ಅನುಷ್ಠಾನ ಹಂತದಲ್ಲಿರುವುದರಿಂದ ರಾಜ್ಯ ಸರ್ಕಾರಗಳು ತಮ್ಮ ಆಯವ್ಯಯದಲ್ಲಿ ಯೋಜನೆಗಳನ್ನು ಅನುಷ್ಠಾನ ಮಾಡಲು ಸೂಚನೆ ನೀಡಿರುತ್ತದೆ.

ಮೇಲೆ ಓದಲಾದ (2)ರ ಸಭೆಯ ನಡವಳಿಯಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ-ಜಲಾನಯನ ಅಭಿವೃದ್ಧಿ ಘಟಕದ (PMKSY-WDC) ಬ್ಯಾಚ್-V ಮತ್ತು ಬ್ಯಾಚ್-VI ರ ಯೋಜನೆಗಳು ಕೇಂದ್ರ ಪುರಸ್ಕೃತ ಕಾರ್ಯಕ್ರಮವಾಗಿರುವುದರಿಂದ ಹಾಗೂ ಈ ಕಾರ್ಯಕ್ರಮದ ಎಲ್ಲಾ 132 ಯೋಜನೆಗಳನ್ನು ದಿನಾಂಕ: 01.09.2018ರಿಂದ ಜಾರಿಗೆ ಬರುವಂತೆ ಸ್ಥಗಿತಗೊಳಿಸಲು ತೀರ್ಮಾನಿಸಲಾಗಿದ್ದು ಈ ವಿಷಯವನ್ನು ಸಚಿವ ಸಂಪುಟ ಸಭೆಯ ಗಮನಕ್ಕೆ ತರುವಂತೆ ಸೂಚಿಸಲಾಗಿದೆ. ಹಾಗೂ ಈ ಯೋಜನೆಗಳಲ್ಲಿ ಮಂಜೂರಾದ ಕಾಮಗಾರಿಗಳನ್ನು MGNREGA, ಪ್ರಧಾನಮಂತ್ರಿ ಕೃಷಿ ಸಿಂಚಯಿ ಯೋಜನೆ-ಇತರೆ ಉಪಚಾರ ಮತ್ತು RKVY ಯೋಜನೆಗಳಡಿ ಮತ್ತು ಇತರೆ ಲಭ್ಯ ಯೋಜನೆಗಳಲ್ಲಿ ಆಯಾ ಯೋಜನೆಗಳ ಮಾರ್ಗಸೂಚಿ ಅನುಸಾರ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಸೂಚಿಸಲಾಗಿದೆ.

.2..

ಮೇಲೆ ಓದಲಾದ (3)ರ ಪ್ರಸ್ತಾವನೆಗಳಲ್ಲಿ, ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ-ಜಲಾನಯನ ಅಭಿವೃದ್ಧಿ ಘಟಕದ (PMKSY-WDC) ಬ್ಯಾಚ್-V ಮತ್ತು ಬ್ಯಾಚ್-VI ರಡಿಯ ಒಟ್ಟು 141 ಯೋಜನೆಗಳಲ್ಲಿ 8 ಯೋಜನೆಗಳನ್ನು ಸುಜಲ-III ರಡಿ ಮುಂದುವರೆಸುತ್ತಿದ್ದು, 1 ಯೋಜನೆಯನ್ನು ಕೈಬಿಡಲಾಗಿದೆ. ಉಳಿದ 132 ಯೋಜನೆಗಳನ್ನು ದಿನಾಂಕ: 01.09.2018ರಿಂದ ಸ್ಥಗಿತಗೊಳಿಸಲು, ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 14.08.2018ರಂದು ನಡೆದ ಸಭೆಯಲ್ಲಿ ತೀರ್ಮಾನಿಸಿ, ಸದರಿ ವಿಷಯವನ್ನು ಸಚಿವ ಸಂಪುಟದ ಗಮನಕ್ಕೆ ತರುವಂತೆ ಸೂಚಿಸಿರುವ ಹಿನ್ನೆಲೆಯಲ್ಲಿ ಮುಂದಿನ ಅಗತ್ಯ ಕ್ರಮಕೈಗೊಳ್ಳುವಂತೆ ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರು ಕೋರಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ದಿನಾಂಕ: 09.07.2019 ರಂದು ನಡೆದ ಸಚಿವ ಸಂಪುಟದ ಅನುಮೋದನೆ ಪಡೆದು ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 117 ಕೃಕೈಉ 2018, ಬೆಂಗಳೂರು,**

**ದಿನಾಂಕ: 05.08.2019.**

ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ – ಜಲಾನಯನ ಅಭಿವೃದ್ಧಿ ಘಟಕ (PMKSY-WDC) ಬ್ಯಾಚ್-V ಮತ್ತು ಬ್ಯಾಚ್-VI ರಡಿ ಅನುಮೋದನೆಗೊಂಡ ಒಟ್ಟು 141 ಯೋಜನೆಗಳಲ್ಲಿ 132 ಯೋಜನೆಗಳನ್ನು (ಸುಜಲ-III ರಡಿ ಮುಂದುವರೆಸಲಾದ 8 ಯೋಜನೆಗಳು ಮತ್ತು ಕೈಬಿಡಲಾದ 1 ಯೋಜನೆಯನ್ನು ಹೊರತು ಪಡಿಸಿ) ದಿನಾಂಕ: 01.09.2018ರಿಂದ ರಾಜ್ಯದಲ್ಲಿ ಸ್ಥಗಿತಗೊಳಿಸಲಾದ ಕ್ರಮಕ್ಕೆ ಸರ್ಕಾರವು ಘಟನೋತ್ತರ ಅನುಮೋದನೆ ನೀಡಿದೆ.

ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ – ಜಲಾನಯನ ಅಭಿವೃದ್ಧಿ ಘಟಕ (PMKSY-WDC) ಬ್ಯಾಚ್-V ಮತ್ತು ಬ್ಯಾಚ್-VI ರಡಿ ಮಂಜೂರಾದ ಕಾಮಗಾರಿಗಳನ್ನು MGNREGA, ಪ್ರಧಾನಮಂತ್ರಿ ಕೃಷಿ ಸಿಂಚಯಿ ಯೋಜನೆ-ಇತರೆ ಉಪಚಾರ ಮತ್ತು RKVY ಯೋಜನೆಗಳಡಿ ಮತ್ತು ಇತರೆ ಲಭ್ಯ ಯೋಜನೆಗಳಲ್ಲಿ ಆಯಾ ಯೋಜನೆಗಳ ಮಾರ್ಗಸೂಚಿ ಅನುಸಾರ ಕಾಮಗಾರಿಗಳನ್ನು ಅನುಷ್ಠಾನಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ).
05/08/2019

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.

4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ. ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಆಯುಕ್ತರು/ ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು
7. ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
9. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
10. ನಿರ್ದೇಶಕರು, TNMC, ಖನಿಜ ಭವನ ಬೆಂಗಳೂರು.
11. ಸಚಿವ ಸಂಪುಟ ಶಾಖೆ, ವಿಧಾನಸೌಧ, ಪ್ರಕರಣ ಸಂಖ್ಯೆ: ಸಿ:399/2019, ದಿನಾಂಕ: 09.07.2019.
12. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ– 4&5), ಆರ್ಥಿಕ ಇಲಾಖೆ, ಬೆಂಗಳೂರು
14. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
15. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.